# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 503 (698)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಜಲ ಸಂಪನ್ಮೂಲ ಸಚಿವರು

ವಿಷಯ : ಬೀದರ್ ಜಿಲ್ಲೆಯ ಮಾಂಜ್ರಾ ನದಿಯ ಬ್ಯಾರೇಜ್ ಕಾಮಗಾರಿಯ ಲೋಪದೋಷ ಕುರಿತು

(ಅ) ಬೀದರ್ ಜಿಲ್ಲೆಯ ಮಾಂಜ್ರಾ ನದಿಯ ಸರಣಿ ಬ್ಯಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ; (ಮುಗಿದಿದ್ದಲ್ಲಿ, ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿಗಳು ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳನ್ನು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ;

(ಇ) ನಾಲ್ಕು ಬ್ಯಾರೇಜ್‌ಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ?